ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 102 ಜಿಪಸ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 29.10.2014

ಇವರಿಂದ:

**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,**
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ:

**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
ಜಿಲ್ಲಾ ಪಂಚಾಯತಿ,
**ಬೆಂಗಳೂರು ನಗರ ಹಾಗೂ ಉತ್ತರ ಕನ್ನಡ**

ಮಾನ್ಯರೆ,

ವಿಷಯ: 2014-15ನೇ ಸಾಲಿನ ವಾರ್ಷಿಕವಾಗಿ ಪ್ರತಿ ಜಿಲ್ಲಾ ಪಂಚಾಯತಿಗಳಿಗೆ ಜನಸಂಖ್ಯೆಗನುಗುಣವಾಗಿ ಒದಗಿಸಲಾಗುವ ಶಾಸನಬದ್ಧ (ಅಭಿವೃದ್ಧಿ) ಅನುದಾನದಡಿ ಕ್ರಿಯಾ ಯೋಜನೆಯನ್ನು ರೂಪಿಸಲು ಹೊರಡಿಸಿರುವ ಮಾರ್ಗಸೂಚಿಯ ಬಗ್ಗೆ.

ಉಲ್ಲೇಖ: 1. ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಪತ್ರ ಕ್ರಮಾಂಕ: ಬೆಂ.ಜಿ.ಪಂ/ಯೋವಿ/13 SEP/TSP/ಅಅ/2014-15, ದಿನಾಂಕ: 23.09.2014.
2. ಅಧ್ಯಕ್ಷರು, ಉತ್ತರ ಕನ್ನಡ ಜಿಲ್ಲಾ ಪಂಚಾಯತಿ, ಕಾರವಾರ.
3. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 75 ಜಿಪಸ 2013, ದಿನಾಂಕ: 17.07.2013.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ ತಮ್ಮ ಗಮನವನ್ನು ಉಲ್ಲೇಖದತ್ತ ಸೆಳೆಯಲಾಗಿದೆ. ಇತ್ತೀಚೆಗೆ ಸರ್ಕಾರವು ತನ್ನ ಆದೇಶ ಕ್ರಮಾಂಕ ಗ್ರಾಅಪ 102 ಜಿಪಸ 2014, ದಿನಾಂಕ: 18.09.2014 ರಂದು ಶಾಸನ ಬದ್ಧ ಅನುದಾನದ 2ನೇ ಕಂತನ್ನು ಬಿಡುಗಡೆ ಮಾಡುವ ಸಂದರ್ಭದಲ್ಲಿ ಈ ಹಿಂದೆ ನೀಡಿದ್ದ ಮಾರ್ಗಸೂಚಿಯನ್ವಯ ಕಾರ್ಯಮಗಳನ್ನು ಜಾರಿಗೊಳಿಸಬೇಕೆಂದು ನಿಖರವಾಗಿ ತಿಳಿಸುತ್ತ ಮತ್ತೊಮ್ಮೆ ಅದನ್ನು ಪುನರುಚ್ಚರಿಸಿರುತ್ತದೆ. ಆದರು ಸಹ ಸದರಿ ಅದೇಶದಲ್ಲಿ ಪುನರುಚ್ಚರಿಸಿದ ಕೆಲವು ಮಾರ್ಗಸೂಚಿಗಳು ಉಲ್ಲೇಖಿತ (3)ರ ಸರ್ಕಾರದ ಆದೇಶದಲ್ಲಿ ತಿಳಿಸಿರುವ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾಗಿರುತ್ತದೆ ಎಂದು ಉಲ್ಲೇಖಿತ (1) ಮತ್ತು (2)ರ ಪತ್ರಗಳಲ್ಲಿ ತಿಳಿಸಿ ಸ್ಪಷ್ಟೀಕರಣ ಕೇಳಿರುತ್ತಾರೆ.

ಸದರಿ ವಿಷಯದ ಬಗ್ಗೆ ಪರಿಶೀಲಿಸಲಾಗಿ, ಕೆಳಕಂಡಂತೆ ಸ್ಪಷ್ಟೀಕರಣ ನೀಡಿರುತ್ತದೆ. ಸದರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ **ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 75 ಜಿಪಸ 2013, ದಿನಾಂಕ: 17.07.2013 ರಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ನು ಮತ್ತೊಮ್ಮೆ ಕಟ್ಟು ನಿಟ್ಟಾಗಿ ಪಾಲಿಸಲು** ತಿಳಿಸಿದೆ. ಅದೇ ರೀತಿ ಪ್ರತಿ ಜಿಲ್ಲೆಗೆ ಈ ಯೋಜನೆಯಡಿಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ.ಗೆ ಗುರಿ ನಿಗಧಿಪಡಿಸಿದ್ದು, ಅದರಂತೆ ಕಾರ್ಯಕ್ರಮಗಳನ್ನು ರೂಪಿಸಿ ಪ್ರತಿ ತಿಂಗಳು ಇದರ ಪ್ರಗತಿ ವರದಿಯನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸಲು ಸಹ ತಿಳಿಸಿದೆ.

ಪ್ರಯುಕ್ತ ತಮ್ಮ ಹಂತದಲ್ಲಿ ಈಗಾಗಲೇ ಉಲ್ಲೇಖ(3)ರಲ್ಲಿ ನೀಡಿರತಕ್ಕಂತಹ ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ, ಕಾರ್ಯರೂಪಕ್ಕೆ ತರುವಲ್ಲಿ ಯಶಸ್ವಿ ಪಾತ್ರವನ್ನು ನಿರ್ವಹಿಸಬೇಕೆಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ. ಇದನ್ನು ಅತ್ಯಂತ ಮುತುವರ್ಜಿವಹಿಸಿ ಕ್ರಿಯಾ ಯೋಜನೆ ತಯಾರಿಸುವಲ್ಲಿ ಯಾವುದೇ ರೀತಿಯ ಪ್ರಮಾದಕ್ಕೆ ಎಡೆಮಾಡಿಕೊಡಬಾರದಾಗಿಯೂ ಈ ಮೂಲಕ ಮತ್ತೊಮ್ಮೆ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ
ಎಸ್.ಎಸ್. ಕಲಾವತಿ
(ಎಸ್.ಎಸ್. ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿಗಳು(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿ:

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬಾಗಲಕೋಟೆ, ಬೆಂಗಳೂರು(ಗ್ರಾಮಾಂತರ), ರಾಮನಗರ, ಬಳ್ಳಾರಿ, ಬೆಳಗಾವಿ, ಬೀದರ, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಗದಗ, ಗುಲ್ಬರ್ಗಾ, ಯಾದಗಿರಿ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ಶಿವಮೊಗ್ಗ, ತುಮಕೂರು ಹಾಗೂ ಉಡುಪಿ.